# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲ್ಲೂಕಿನ ಚಾಕೇನಹಳ್ಳಿ ಕೆರೆಗೆ ಹೇಮಾವತಿ ನದಿಯಿಂದ ನೀರನ್ನು ಎತ್ತಿ ಕುಡಿಯುವ ನೀರಿಗಾಗಿ ನೀರು ತುಂಬಿಸುವುದು ಹಾಗೂ ಒಂಟಿಗುಡ್ಡ ಏತ ನೀರಾವರಿ ಯೋಜನೆಯ ನಾಲೆಯ ನಿರ್ಮಾಣ ಕಾಮಗಾರಿಯ ಅಂದಾಜು ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

** ** **

*ಓದಲಾಗಿದೆ :-*

ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು, ಇವರ ಪತ್ರ ಸಂಖ್ಯೆ:ಕಾನೀನಿ/ತಾಂತ್ರಿಕ-4/HRBC-974/2018-19/4138, ದಿನಾಂಕ:21/22-02-2019.

*ಪ್ರಸ್ತಾವನೆ :-*

ಮೇಲೆ ಓದಲಾದ ಪತ್ರಗಳಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು, ಇವರು ಒಂಟಿಗುಡ್ಡ ಏತ ನೀರಾವರಿ ಯೋಜನೆಯನ್ನು 1997-98 ರಲ್ಲಿ ಪ್ರಾರಂಭಿಸಿದ್ದು, ಈ ಯೋಜನೆಯಡಿಯಲ್ಲಿ ಖಾರಿಫ್ ಋತುವಿನಲ್ಲಿ 1024 ಎಕರೆ ಅರೆ ನೀರಾವರಿ ಬೆಳೆಗೆ ನೀರನ್ನು ಒದಗಿಸಲು ಯೋಜಿಸಲಾಗಿದ್ದು, ಸದರಿ ಯೋಜನೆ ಅಡಿಯಲ್ಲಿ ದೊಡ್ಡಕುಂಚ ಕೆರೆಯಿಂದ 27.09 ಮೀ ಗೆ ನೀರನ್ನು ಎತ್ತಿ ಮೇಲ್ಮಟ್ಟದ ಕಾಂಟೂರ್ ನಾಲೆ (high level contour canal) ಮತ್ತು 19.63 ಮೀ.ಗೆ ನೀರನ್ನು ಎತ್ತಿ ಕೆಳಮಟ್ಟದ ಕಾಂಟೂರ್ ನಾಲೆಗೆ (low level contour canal) ನೀರನ್ನು ಹರಿಸಲು ಯೋಜಿಸಲಾಗಿದೆ ಹಾಗೂ ಇದರಿಂದ ಕ್ರಮವಾಗಿ 600 ಎಕರೆ ಮತ್ತು 400 ಎಕರೆ ಅಚ್ಚುಕಟ್ಟು ಪ್ರದೇಶಕ್ಕೆ ನೀರನ್ನು ಒದಗಿಸಲಾಗುತ್ತಿದೆ ಎಂದು ವರದಿ ಮಾಡಿರುತ್ತಾರೆ.

2. ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲ್ಲೂಕಿನ ಹಳೇಕೋಟೆ ಹೋಬಳಿಯ ಕುಂಕುಮ ಹೊಸೂರು ಗ್ರಾಮದ ಬಳಿ ಹೇಮಾವತಿ ನದಿಯಿಂದ 36 ಕ್ಯೂಸೆಕ್ಸ್ (140.00 ಎಂಸಿಎಫ್‌ಟಿ) ನೀರನ್ನು 5.20 ಕಿ.ಮೀ ಉದ್ದದ 1000 ಮಿ.ಮಿ ವ್ಯಾಸದ ಏರು ಕೊಳವೆ ಮುಖಾಂತರ 800 ಹೆಚ್.ಪಿ (2+1) ಪಂಪುಗಳ ಮೂಲಕ ಸುಮಾರು [illegible].40 ಮೀ. ಎತ್ತರಕ್ಕೆ (Static head) ಎತ್ತಿ ನಂತರ (1.) 3.60 ಕಿ.ಮೀ ಉದ್ದದ 700 ಮಿ.ಮೀ ವ್ಯಾಸದ ಕೊಳವೆ ಮಾರ್ಗದ (ಗ್ರಾವಿಟಿ ಮೈನ್) ಮೂಲಕ ಚಾಕೇನಹಳ್ಳಿ ಕೆರೆಗೆ ನೀರು ತುಂಬಿಸುವುದು ಹಾಗೂ 5.90 ಕಿ.ಮೀ ಉದ್ದದ ಮತ್ತೊಂದು ತೆರೆದ ನಾಲೆಯ ಮೂಲಕ 837 ಎಕರೆ ಹೊಸ ಅಚ್ಚುಕಟ್ಟಿಗೆ ಹಾಗೂ 1471 ಎಕರೆ ಭಾದಿತ ಅಚ್ಚುಕಟ್ಟಿಗೆ ನೀರು ಒದಗಿಸುವುದಾಗಿದೆ.

3. ಈ ಯೋಜನೆಯನ್ವಯ ಮಳೆಗಾಲದ (Monsoon period) 45 ದಿನಗಳ ಕಾಲ (24 ಗಂಟೆ) ದಿನಂಪ್ರತಿ 36 ಕ್ಯೂಸೆಕ್ಸ್ ನಂತೆ ಒಟ್ಟು 140 ಎಂ.ಸಿ.ಎಫ್.ಟಿ. ನೀರನ್ನು ಎತ್ತಲು ಉದ್ದೇಶಿಸಲಾಗಿರುತ್ತದೆ. ಅದರಂತೆ ಕಾಮಗಾರಿಗಳನ್ನು ಕೈಗೊಳ್ಳಲು ಪ್ರಸ್ತುತ ತಯಾರಿಸಿರುವ ರೂ.54.00 ಕೋಟಿ ಮೊತ್ತದ ಡಿ.ಪಿ.ಆರ್ ಪ್ರಸ್ತಾವನೆಯಲ್ಲಿ ಅನುವು ಮಾಡಲಾಗಿದೆ.

4. ಸದರಿ ಯೋಜನೆಯಿಂದ ಹೊಸದಾಗಿ 837 ಎಕರೆ ಅಚ್ಚುಕಟ್ಟು ಪ್ರದೇಶಕ್ಕೆ ನೀರೊದಗಿಸಲು ಉದ್ದೇಶಿಸಲಾಗಿದೆ. ಜೊತೆಗೆ ಚಾಕೇನಹಳ್ಳಿ ಕೆರೆಯ 1471 ಎಕರೆಗೆ ಭಾದಿತ ಅಚ್ಚುಕಟ್ಟಿಗೆ ನೀರು ಹರಿಸಲು ಉದ್ದೇಶಿಸಲಾಗಿದೆ. ಇದರಿಂದ ಒಟ್ಟಾರೆ ಒಂಟಿಗುಡ್ಡ ಏತ ನೀರಾವರಿ ಯೋಜನೆಯಲ್ಲಿ 3332 ಎಕರೆ ಅಚ್ಚುಕಟ್ಟು ಪ್ರದೇಶಕ್ಕೆ ನೀರು ಒದಗಿಸಬಹುದಾಗಿರುತ್ತದೆ. ಸದರಿ ಪ್ರಸ್ತಾವನೆಯು ದಿನಾಂಕ:01-02-2019 ರಂದು ನಡೆದ ಕಾವೇರಿ ನೀರಾವರಿ ನಿಗಮದ 67ನೇ ಮಂಡಳಿ ಸಭೆಯಲ್ಲಿ ಅನುಮೋದನೆಯಾಗಿರುತ್ತದೆ.

5. ಈ ಹಿನ್ನೆಲೆಯಲ್ಲಿ, ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲ್ಲೂಕಿನ ಚಾಕೇನಹಳ್ಳಿ ಕೆರೆಗೆ ಹೇಮಾವತಿ ನದಿಯಿಂದ ನೀರನ್ನು ಎತ್ತಿ ಕುಡಿಯುವ ನೀರಿಗಾಗಿ ನೀರು ತುಂಬಿಸುವುದು ಹಾಗೂ ಒಂಟಿಗುಡ್ಡ ಏತ ನೀರಾವರಿ

ಯೋಜನೆಯ ನಾಲೆಯ ನಿರ್ಮಾಣ ಕಾಮಗಾರಿಯ ರೂ.54.00 ಕೋಟಿ ಮೊತ್ತದ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ರವರು ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

6. ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ : ಜಸಂಇ 14 ಎನ್‌ಹೆಚ್‌ಪಿ 2019,**
**ಬೆಂಗಳೂರು, ದಿನಾಂಕ : 30-05-2019**

ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲ್ಲೂಕಿನ ಚಾಕೇನಹಳ್ಳಿ ಕೆರೆಗೆ ಹೇಮಾವತಿ ನದಿಯಿಂದ 140 ಎಂ.ಸಿ.ಎಫ್.ಟಿ. ನೀರನ್ನು ಎತ್ತಿ ಕುಡಿಯುವ ನೀರಿಗಾಗಿ ನೀರು ತುಂಬಿಸುವುದು ಹಾಗೂ ಒಂಟಿಗುಡ್ಡ ಏತ ನೀರಾವರಿ ಯೋಜನೆಯ ನಾಲೆಯ ನಿರ್ಮಾಣ ಕಾಮಗಾರಿಯ ರೂ.54.00 ಕೋಟಿ (ರೂಪಾಯಿ ಐವತ್ನಾಲ್ಕು ಕೋಟಿಗಳು ಮಾತ್ರ) ಗಳ ಮೊತ್ತದ ಅಂದಾಜು ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

2. ಈ ಆದೇಶವನ್ನು ಆರ್ಥಿಕ ಇಲಾಖೆಯು ತನ್ನ ಟಿಪ್ಪಣಿ ಸಂಖ್ಯೆ:ಆಇ 161 ಆಕೋ-1/2019, ದಿನಾಂಕ:24-05-2019, ರಲ್ಲಿ ನೀಡಲಾದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
30/05/19
(ಬಿ.ಹರಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-2)
ಜಲ ಸಂಪನ್ಮೂಲ ಇಲಾಖೆ.

ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-2)
ಜಲ ಸಂಪನ್ಮೂಲ ಇಲಾಖೆ,
ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ, ಬೆಂಗಳೂರು.

ಇವರಿಗೆ :-

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ ಲೆಕ್ಕಪರಿಶೋಧನ), ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಹೇಮಾವತಿ ಯೋಜನಾ ವಲಯ, ಗೊರೂರು.
4. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ. ಆರ್ಥಿಕ ಕೋಶ), ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿ (ಸಚಿವ ಸಂಪುಟ), ಕರ್ನಾಟಕ ಸರ್ಕಾರ (ಪ್ರಕರಣ ಸಂಖ್ಯೆ:ಸಿ-313/2019, ದಿನಾಂಕ:27-05-2019).
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.